ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

1032 (1191) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾಸನ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ಮತ್ತು ಯಾವುವು ಹಾಗೂ ಅವುಗಳ ಸಾಮರ್ಥ್ಯವೆಷ್ಟು; ಸ್ವಂತ ಕಟ್ಟಡ ಹೊಂದಿರುವ ಹಾಸ್ಟೆಲ್ ಗಳೆಷ್ಟು; ಬಾಡಿಗೆ ಕಟ್ಟಡಗಳಲ್ಲಿರುವ ಹಾಸ್ಟೆಲ್‌ಗಳೆಷ್ಟು; (ತಾಲ್ಲೂಕುವಾರು ಮತ್ತು ಹಾಸ್ಟೆಲ್‌ವಾರು ಮಾಹಿತಿ ನೀಡುವುದು)

(ಆ) ಕಳೆದೆರಡು ವರ್ಷಗಳಿಂದ ಹಾಸನ ಜಿಲ್ಲೆಯ ಪ್ರತಿ ಹಾಸ್ಟೆಲ್‌ಗೆ ದಾಖಲಾತಿ ಕೋರಿ ಸ್ವೀಕೃತವಾಗಿರುವ ಅರ್ಜಿಗಳೆಷ್ಟು; ಇದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ದಾಖಲಾತಿ ನೀಡಲಾಗಿದೆ; (ತಾಲ್ಲೂಕುವಾರು ಮತ್ತು ಹಾಸ್ಟೆಲ್‌ವಾರು ಮಾಹಿತಿ ನೀಡುವುದು)

(ಇ) ಹಾಸ್ಟೆಲ್ ಸೀಟು ಪಡೆಯಲು ಸಾಧ್ಯವಾಗದ ವಿದ್ಯಾರ್ಥಿಗಳಿಗೆ ಸರ್ಕಾರವು ಕಲ್ಪಿಸಿರುವ ಸೌಲಭ್ಯಗಳೇನು; (ವಿವರ ನೀಡುವುದು)

(ಈ) ಈ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಕಲ್ಪಿಸಿರುವ ಸೌಲಭ್ಯಗಳೇನು; ಖಾಸಗಿ ಕಟ್ಟಡಗಳಲ್ಲಿರುವ ಹಾಸ್ಟೆಲ್‌ಗಳ ಬದಲಿಗೆ ಸ್ವಂತ ಕಟ್ಟಡ ಹೊಂದಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)